ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, ಸಂಪಿಗೆ ರಸ್ತೆ, 18ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿಇ/ಶೈಶಾ/ಪು.ಪ.ವಿ.ದಾ./2021-22 ದಿನಾಂಕ: 12.10.2021

## ಸುತ್ತೋಲೆ

ವಿಷಯ: ಕರ್ನಾಟಕ ರಾಜ್ಯದ SSLC ಪೂರಕ ಪರೀಕ್ಷೆಯಲ್ಲಿ ಉತ್ತೀರ್ಣರಾದ ವಿದ್ಯಾರ್ಥಿಗಳಿಗೆ ದಾಖಲಾತಿ ಕುರಿತು.

* * * * *

2020-21ನೇ ಶೈಕ್ಷಣಿಕ ಸಾಲಿನ SSLC ಪೂರಕ ಪರೀಕ್ಷೆಯನ್ನು 2021ರ ಸೆಪ್ಟೆಂಬರ್ ತಿಂಗಳಿನಲ್ಲಿ ನಡೆಸಲಾಗಿತ್ತು. ಈ ಪರೀಕ್ಷೆಯ ಫಲಿತಾಂಶವು ದಿನಾಂಕ 11.10.2021 ರಂದು ಪ್ರಕಟಗೊಂಡಿರುತ್ತದೆ. ಈ ಹಿನ್ನೆಲೆಯಲ್ಲಿ ಸದರಿ ಪರೀಕ್ಷೆಯಲ್ಲಿ ಉತ್ತೀರ್ಣಗೊಂಡ ವಿದ್ಯಾರ್ಥಿಗಳನ್ನು ಪ್ರಥಮ ಪಿಯುಸಿ ತರಗತಿಗೆ ಈ ಕೆಳಗಿನಂತೆ ದಾಖಲಾತಿ ಮಾಡಿಕೊಳ್ಳಲು ಆದೇಶಿಸಿದೆ.

| ತರಗತಿ | ದಂಡ ಶುಲ್ಕವಿಲ್ಲದೆ ದಾಖಲಾತಿ ದಿನಾಂಕ (ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯ ನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) | ವಿಳಂಬ ದಾಖಲಾತಿ ರೂ 670/- (ರೂ ಆರುನೂರ ಎಪ್ಪತ್ತು ಮಾತ್ರ) ದಂಡ ಶುಲ್ಕದೊಂದಿಗೆ (ಎರಡು ದಿನಗಳು ಸೇರಿವೆ) (ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) | ವಿಶೇಷ ದಂಡ ಶುಲ್ಕ ರೂ. 2890/- (ರೂ 2220/- ಎರಡು ಸಾವಿರದ ಎರಡು ನೂರ ಇಪ್ಪತ್ತು + ರೂ 670/- ಆರುನೂರ ಎಪ್ಪತ್ತು ಮಾತ್ರ) (ಖಜಾನೆಗೆ ಶುಲ್ಕವನ್ನು ಮಾರನೇ ಕಾರ್ಯನಿರತ ದಿನಾಂಕದಂದು ಕಡ್ಡಾಯವಾಗಿ ಪಾವತಿಸುವುದು) |
|---|---|---|---|
| ಪ್ರಥಮ ಪಿಯುಸಿ | **12.10.2021 ರಿಂದ 23.10.2021** | **25.10.2021 ರಿಂದ 30.10.2021** | **02.11.2021 ರಿಂದ 09.11.2021** |

**2021-22ರ ಮಾರ್ಗಸೂಚಿಯಲ್ಲಿ ತಿಳಿಸಿರುವಂತೆ ದಾಖಲಾತಿ ಶುಲ್ಕಗಳನ್ನು ಸಂಗ್ರಹಿಸುವುದು. ಈ ರೀತಿ ಸಂಗ್ರಹಿಸಿದ ಶುಲ್ಕಗಳನ್ನು ಸರ್ಕಾರ / ಇಲಾಖೆಗೆ ದಾಖಲಾತಿ ದಿನಾಂಕ ಮುಗಿದ ಮಾರನೇ ಕಾರ್ಯನಿರತ ದಿನಾಂಕದಂದು ಖಜಾನೆಗೆ ಕಡ್ಡಾಯವಾಗಿ ಜಮೆ ಮಾಡುವುದು. ಈ ಸಂಬಂಧ ಪ್ರಾಂಶುಪಾಲರು / ಆಡಳಿತ ಮಂಡಳಿಯವರು ಪೂರ್ಣ ಜವಾಬ್ದಾರರಾಗಿರುತ್ತಾರೆ ಎಂದು ಸೂಚಿಸಿದೆ.**

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ,

ಪ್ರತಿಗಳು:

1. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ ಮುಂದಿನ ಸೂಕ್ತ ಕ್ರಮಕ್ಕಾಗಿ.
2. ರಾಜ್ಯದ ಎಲ್ಲಾ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರಿಗೆ, ಅಗತ್ಯ ಕ್ರಮಕ್ಕಾಗಿ, ಜಿಲ್ಲಾ ಉಪನಿರ್ದೇಶಕರು ಇವರ ಮುಖಾಂತರ.
3. ಮಾನ್ಯ ನಿರ್ದೇಶಕರ ಆಪ್ತಶಾಖೆ ಪದವಿ ಪೂರ್ವ ಶಿಕ್ಷಣ ಇಲಾಖೆ ಇವರಿಗೆ ಮಾಹಿತಿಗಾಗಿ.
4. ಇ-ಆಡಳಿತ ಶಾಖೆ, ಸಂಬಂಧಪಟ್ಟ ಜಿಲ್ಲಾ ಉಪನಿರ್ದೇಶಕರು-ಇವರಿಗೆ ಇ-ಮೇಲ್ ಕಳುಹಿಸಲು ಕ್ರಮವಹಿಸುವುದು.
5. ಹೆಚ್ಚುವರಿ / ಕಛೇರಿ ಪ್ರತಿ.